# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1349 |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 22-08-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ರೈತರಿಗೆ ಸಮರ್ಪಕವಾಗಿ ಗೊಬ್ಬರ ಪೂರೈಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಎಷ್ಟು ಗೊಬ್ಬರವನ್ನು ಪೂರೈಸಲಾಗುತ್ತಿದೆ; (ಜಿಲ್ಲಾವಾರು ವರದಿ ನೀಡುವುದು) | ಕೇಂದ್ರ ಸರ್ಕಾರದಿಂದ 2025ನೇ ಸಾಲಿನ ಮುಂಗಾರು ಹಂಗಾಮಿಗೆ ಒಟ್ಟು 26.77 ಲಕ್ಷ ಮೆ.ಟನ್ ವಿವಿಧ ಶ್ರೇಣಿಗಳ ರಸಗೊಬ್ಬರಗಳ ಹಂಚಿಕೆಯನ್ನು ಮಾಡಲಾಗಿರುತ್ತದೆ.<br><br>ಹಂಚಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರವು ಕೇಂದ್ರ ಸರ್ಕಾರದಿಂದ ಸರಬರಾಜಾಗದ ಕಾರಣ ಕೆಲವು ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರಕ್ಕೆ ಕೊರತೆ ಉಂಟಾಗಿರುತ್ತದೆ. ಏಪ್ರಿಲ್ ಮಾಹೆಯಿಂದ ಆಗಸ್ಟ-2025 ಮಾಹೆಯವರೆಗೆ 9.05 ಲಕ್ಷ ಮೆ.ಟನ್ ಹಂಚಿಕೆಗೆ ದಿನಾಂಕ 16.8.2025ರಂತೆ 6.49 ಲಕ್ಷ ಮೆ.ಟನ್ ಸರಬರಾಜಾಗಿ, 2.56 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರದ ಸರಬರಾಜಿಗೆ ಬಾಕಿ ಇರುತ್ತದೆ.<br><br>ರಾಜ್ಯಕ್ಕೆ ಹಂಚಿಕೆಯಾಗಿರುವ ಹಾಗೂ ಸರಬರಾಜಾಗಿರುವ ರಸಗೊಬ್ಬರದ ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| (ಆ) | ರಾಜ್ಯದಲ್ಲಿನ ಪ್ರತಿ ಜಿಲ್ಲೆಗೆ ಎಷ್ಟು ಗೊಬ್ಬರದ ಅವಶ್ಯಕತೆ ಇದೆ; (ಮಾಹಿತಿ ನೀಡುವುದು) | ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ 2025ನೇ ಸಾಲಿನ ಮುಂಗಾರು ಹಂಗಾಮಿಗೆ 26.77 ಲಕ್ಷ ಮೆ.ಟನ್ ವಿವಿಧ ಶ್ರೇಣಿಯ ರಸಗೊಬ್ಬರವನ್ನು ಹಂಚಿಕೆ ಮಾಡಲಾಗಿರುತ್ತದೆ. ಜಿಲ್ಲಾವಾರು ಹಂಚಿಕೆ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಇ) | ಪ್ರಸ್ತುತ ರಾಜ್ಯದಲ್ಲಿ ಗೊಬ್ಬರದ ಅಭಾವ ಉಂಟಾಗಿರುವುದು ನಿಜವೇ; ಹಾಗಿದ್ದಲ್ಲಿ, ಸರ್ಕಾರದ ಕ್ರಮಗಳೇನು; ಅಭಾವ ಉಂಟಾಗಲು ಕಾರಣಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಸಾಲಿನಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರವನ್ನು ಹೊರತು ಪಡಿಸಿ ಇತರ ರಸಗೊಬ್ಬರಗಳ ಕೊರತೆಯಾಗಿರುವುದಿಲ್ಲ. |

| | | |
|---|---|---|
| | | ಮೇ ಮತ್ತು ಜೂನ್ ಮಾಹೆಗಳಲ್ಲಿ ಬೇಡಿಕೆ ಅಥವಾ ಹಂಚಿಕೆಗೆ ಅನುಗುಣವಾಗಿ ಡಿ.ಎ.ಪಿ ರಸಗೊಬ್ಬರ ಸರಬರಾಜಾಗದ ಕಾರಣ ಮುಂಗಾರು ಬಿತ್ತನೆ ಸಮಯದಲ್ಲಿ ಕೆಲವು ಜಿಲ್ಲೆಗಳಲ್ಲಿ ಡಿ.ಎ.ಪಿ ರಸಗೊಬ್ಬರದ ಕೊರತೆ ಉಂಟಾಗಿತ್ತು. ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಕಾಂಪ್ಲೆಕ್ಸ್ ರಸಗೊಬ್ಬರವನ್ನು ಬಳಸಲು ರೈತರಲ್ಲಿ ವ್ಯಾಪಕ ಪ್ರಚಾರವನ್ನು ನೀಡಿ ಡಿ.ಎ.ಪಿ ರಸಗೊಬ್ಬರದ ಕೊರತೆಯನ್ನು ನಿಭಾಯಿಸಲಾಗಿದೆ.<br><br>ಕೇಂದ್ರ ಸರ್ಕಾರದಿಂದ ಬೇಡಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರವು ಸರಬರಾಜಾಗದ ಕಾರಣ ರಾಜ್ಯದಲ್ಲಿ ಕೆಲವು ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರಕ್ಕೆ ಕೊರತೆಯಾಗಿರುತ್ತದೆ.<br><br>ರಾಜ್ಯದಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರದ ಕೊರತೆ ಉಂಟಾಗಲು ಕಾರಣ:<br><br>• ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಮುಂಚಿತವಾಗಿ ಉತ್ತಮವಾಗಿ ಮಳೆಯಾಗಿದ್ದು, ಸಾಮಾನ್ಯ ಅವಧಿಗಿಂತ ಮುಂಚೆ ಬಿತ್ತನೆ ಪ್ರಾರಂಭವಾಗಿದೆ.<br>• ಹೆಚ್ಚು ರಸಗೊಬ್ಬರ ಅವಶ್ಯವಿರುವ ಮುಸುಕಿನ ಜೋಳದ ವಿಸ್ತೀರ್ಣವು ಗಣನೀಯವಾಗಿ ಹೆಚ್ಚಳವಾಗಿರುತ್ತದೆ (ಅಂದಾಜು 2.00 ಲಕ್ಷ ಹೆಕ್ಟೇರ್)<br>• ಅಂದಾಜು 13,000 ಹೆಕ್ಟೇರ್ ಪ್ರದೇಶದಲ್ಲಿ ಮರುಬಿತ್ತನೆ ಕೈಗೊಳ್ಳಲಾಗಿರುತ್ತದೆ.<br>• ಪ್ರಮುಖ ಜಲಾಶಯಗಳಿಂದ (ತುಂಗಭದ್ರಾ, ಕೃಷ್ಣಾ, ಕಾವೇರಿ ಇತ್ಯಾದಿ) ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುತ್ತದೆ.<br>• ಕೇಂದ್ರ ಸರ್ಕಾರದಿಂದ ಪ್ರತಿ ಮಾಹೆಯ ಹಂಚಿಕೆಗನುಗುಣವಾಗಿ ರಸಗೊಬ್ಬರಗಳು ಸರಬರಾಜಾಗಿರುವುದಿಲ್ಲ. |
| (ಈ) | ರಾಜ್ಯ ಸರ್ಕಾರವು ನೇರವಾಗಿ ರೈತರಿಗೆ ಗೊಬ್ಬರವನ್ನು ಹೇಗೆ ವಿತರಣೆ ಮಾಡಲಾಗುತ್ತಿದೆ; (ಮಾಹಿತಿ ನೀಡುವುದು) | ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮಾಹೆವಾರು/ ರಸಗೊಬ್ಬರ ತಯಾರಿಕ ಸಂಸ್ಥೆವಾರು ರಸಗೊಬ್ಬರದ ಹಂಚಿಕೆಯಾಗುತ್ತದೆ. ಇಲಾಖೆಯಿಂದ ಜಿಲ್ಲಾವಾರು /ಸಂಸ್ಥೆವಾರು/ಗ್ರೇಡ್‌ವಾರು ಸರಬರಾಜು ಯೋಜನೆಯನ್ನು ಜಿಲ್ಲೆಗಳಿಗೆ ನೀಡಲಾಗುತ್ತಿದೆ. ರಸಗೊಬ್ಬರ ತಯಾರಿಕಾ ಸಂಸ್ಥೆಯವರಿಂದ ನೇರವಾಗಿ ರಸಗೊಬ್ಬರ ಮಾರಾಟ ಪರವಾನಗಿ ಹೊಂದಿರುವ |

| | | |
|---|---|---|
| | | ಸಹಕಾರ ಸಂಘಗಳು ಹಾಗು ಖಾಸಗಿ ಮಾರಾಟಗಾರರಿಗೆ ಸರಬರಾಜು ಮಾಡಲಾಗುತ್ತದೆ.<br>ತದನಂತರ ಚಿಲ್ಲರೆ ರಸಗೊಬ್ಬರ ಮಾರಾಟಗಾರರಿಂದ ಆಧಾರ್ ಕಾರ್ಡ್ ಪರಿಶೀಲಿಸಿ, ಪಾಯಿಂಟ್ ಆಫ್ ಸೇಲ್ ಉಪಕರಣದ ಮೂಲಕ ರಸಗೊಬ್ಬರವನ್ನು ರೈತರಿಗೆ ವಿತರಣೆ ಮಾಡಲಾಗುತ್ತಿದೆ. |
| (ಊ) | ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರವು ಗೊಬ್ಬರಕ್ಕೆ ಸಂಬಂಧಿಸಿದಂತೆ ಎಷ್ಟು ಸಬ್ಸಿಡಿಯನ್ನು ರಾಜ್ಯ ಸರ್ಕಾರಕ್ಕೆ ನೀಡಲಾಗುತ್ತದೆ? (ಸಂಪೂರ್ಣ ಮಾಹಿತಿ ನೀಡುವುದು) | ಕೇಂದ್ರ ಸರ್ಕಾರದಿಂದ ರಸಗೊಬ್ಬರಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರಕ್ಕೆ ಯಾವುದೇ ಸಬ್ಸಿಡಿಯನ್ನು ನೀಡಲಾಗುತ್ತಿಲ್ಲ.<br>ಕೇಂದ್ರ ಸರ್ಕಾರದಿಂದ ಎನ್/ಪಿ/ಕೆ ರಸಗೊಬ್ಬರಗಳ ಸಹಾಯಧನವನ್ನು ಪಾಯಿಂಟ್ ಆಫ್ ಸೇಲ್‌ನ ಮಾರಾಟವನ್ನು ಆಧರಿಸಿ, ನೇರವಾಗಿ ತಯಾರಕ ಸಂಸ್ಥೆಗಳಿಗೆ ನೀಡಲಾಗುತ್ತಿದೆ. |

ಸಂಖ್ಯೆ: AGRI/271/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು